**ಕರ್ನಾಟಕ ಸರ್ಕಾರ**

ಸಂಖ್ಯೆ: ಡಿಟಿಇ 11 ಎಸಿಎಂ(2) 2017-18

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ: 10-07-2017.

**-:: ಸು ತ್ತೋಲೆ ::-**

**ವಿಷಯ:** 2017-18ನೇ ಸಾಲಿನ ಡಿಪ್ಲೋಮಾ **(ಸಂಜೆ)** ಪ್ರವೇಶ – ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರವೇಶಾವಧಿಯನ್ನು ವಿಸ್ತರಿಸುವ ಬಗ್ಗೆ.

**ಉಲ್ಲೇಖ:** 1. ಈ ಕಛೇರಿಯ ಪ್ರವೇಶಾಧಿಸೂಚನೆಯ ದಿ:16-05-2017.

2. ಹಲವು ಖಾಸಗಿ **(ಸಂಜೆ)** ಪಾಲಿಟೆಕ್ನಿಕ್ ಪ್ರಿನ್ಸಿಪಾಲರುಗಳ ಮನವಿಗಳು.

-0000000-

2017-18ನೇ ಸಾಲಿನ ಪ್ರಥಮ ಡಿಪ್ಲೋಮಾ **(ಸಂಜೆ)** ಪ್ರವೇಶಕ್ಕೆ ಸಂಬಂಧಿಸಿದಂತೆ, ಆಕ್ಸ್‌ಫರ್ಡ್ (ಸಂಜೆ) ಪಾಲಿಟೆಕ್ನಿಕ್, ಬೆಂಗಳೂರು & ನಾಡಿಗಿರ್ (ಸಂಜೆ) ಪಾಲಿಟೆಕ್ನಿಕ್, ಬೆಂಗಳೂರು ಖಾಸಗಿ ಸಂಜೆ ಪಾಲಿಟೆಕ್ನಿಕ್‌ಗಳಲ್ಲಿನ ಪ್ರವೇಶಕ್ಕೆ ಅಂತಿಮ ದಿನಾಂಕ:30-06-2017 ಎಂದು ಉಲ್ಲೇಖ(1)ರಲ್ಲಿ ನಮೂದಿಸಿರುವ ಈ ಕಛೇರಿಯ ಪ್ರವೇಶಾಧಿಸೂಚನೆಯಲ್ಲಿ ನಿಗಧಿಪಡಿಸಲಾಗಿತ್ತು.

ಪ್ರಸ್ತುತ, ಆಕ್ಸ್‌ಫರ್ಡ್ (ಸಂಜೆ) ಪಾಲಿಟೆಕ್ನಿಕ್, ಬೆಂಗಳೂರು & ನಾಡಿಗಿರ್ (ಸಂಜೆ) ಪಾಲಿಟೆಕ್ನಿಕ್, ಬೆಂಗಳೂರು ಸಂಜೆ ಪಾಲಿಟೆಕ್ನಿಕ್‌ಗಳಲ್ಲಿ ಇನ್ನೂ ಅನೇಕ ಸ್ಥಾನಗಳು ಖಾಲಿ ಇರುವುದಾಗಿ ಸಂಬಂಧಿಸಿದ ಸಂಜೆ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರು ವರದಿ ಮಾಡಿ ಪ್ರವೇಶಾವಧಿಯನ್ನು ವಿಸ್ತರಿಸಬೇಕೆಂದು ಕೋರಿರುವುದನ್ನು ಒಟ್ಟಾರೆ ಸಂಸ್ಥೆಗಳ ಹಾಗೂ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಪರಿಗಣಿಸಿ **ಪ್ರವೇಶಾವಧಿಯನ್ನು ದಿನಾಂಕ:20-07-2017ರವರೆಗೆ ವಿಸ್ತರಿಸಲಾಗಿದೆ.**

ಪ್ರಯುಕ್ತ, ಪ್ರವೇಶಾವಧಿಯನ್ನು ವಿಸ್ತರಿಸಲಾದ ಅವಧಿಯಲ್ಲಿ ಪ್ರವೇಶ ಪಡೆದ ಅಭ್ಯರ್ಥಿಗಳ ಸಂಬಂಧದಲ್ಲಿ ನಿಯಮಾನುಸಾರ ಕನಿಷ್ಠ ಹಾಜರಾತಿಯನ್ನು ಪೂರೈಸುವ ಷರತ್ತಿಗೊಳಪಟ್ಟಿರುತ್ತದೆ. ಸದರಿ ಅಭ್ಯರ್ಥಿಗಳಿಗೆ ಪ್ರಥಮ ಡಿಪ್ಲೋಮಾ ತರಗತಿಗಳನ್ನು ಪ್ರಾರಂಭಿಸಲು ಸೂಕ್ತ ವ್ಯವಸ್ಥೆ ಮಾಡುವುದಲ್ಲದೆ, ಮೇಲ್ಕಂಡ ವಿಸ್ತರಿಸಲಾದ ಅವಧಿಯಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ ವಿಶೇಷ ತರಗತಿಗಳನ್ನು ತೆಗೆದುಕೊಳ್ಳುವುದರ ಮೂಲಕ ಪಠ್ಯಕ್ರಮದನ್ವಯ ನಿಗಧಿತ ಪಾಠ ಪ್ರವಚನಗಳನ್ನು ಮುಗಿಸುವಲ್ಲಿ ಕ್ರಮತೆಗೆದುಕೊಂಡು ನಿರ್ದೇಶನಾಲಯಕ್ಕೆ ವರದಿ ಮಾಡುವುದು.

**ಪ್ರಥಮ ಡಿಪ್ಲೋಮಾ (ಸಂಜೆ) ಪ್ರವೇಶಾವಧಿಯನ್ನು ಪುನಃ ವಿಸ್ತರಿಸಲಾಗುವುದಿಲ್ಲ. ಪ್ರಯುಕ್ತ, ಇದನ್ನು ಆಯಾ ಪಾಲಿಟೆಕ್ನಿಕ್‌ನ ಪ್ರಿನ್ಸಿಪಾಲರು ಗಮನದಲ್ಲಿರಿಸಿಕೊಂಡು ನಿಯಮಗಳ ಪ್ರಕಾರ ಪ್ರವೇಶವನ್ನು ಪೂರೈಸುವಲ್ಲಿ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಲಾಗಿದೆ.**

ನಿರ್ದೇಶಕರು

10/07

**ಇವರಿಗೆ,**

*ಪ್ರಿನ್ಸಿಪಾಲರು, ಆಕ್ಸ್‌ಫರ್ಡ್ (ಸಂಜೆ) ಪಾಲಿಟೆಕ್ನಿಕ್, ಬೆಂಗಳೂರು.*
*ಪ್ರಿನ್ಸಿಪಾಲರು, ನಾಡಿಗಿರ್ (ಸಂಜೆ) ಪಾಲಿಟೆಕ್ನಿಕ್, ಬೆಂಗಳೂರು.*

File 11-17 evening(pvt)

<u>ಪ್ರತಿ:</u>

1. ಕಾರ್ಯದರ್ಶಿಯವರು, ತಾಂತ್ರಿಕ ಪರೀಕ್ಷಾ ಮಂಡಳಿ – **ದಿ:20–07–2017ವರೆಗೆ** ಅರ್ಹತಾ ಪ್ರಮಾಣ ಪತ್ರವನ್ನು ವಿತರಿಸುವ ಬಗ್ಗೆ ಸೂಕ್ತ ಕ್ರಮಕ್ಕಾಗಿ.
2. ನಿರ್ದೇಶಕರ ಆಪ್ತಶಾಖೆಗೆ.
3. ಸಾರ್ವಜನಿಕ ಸಂಪರ್ಕಾಧಿಕಾರಿಗಳು, ತಾ.ಶಿ.ನಿ
4. ಇಆರ್‌ಎಸ್(3) ವಿಭಾಗಕ್ಕೆ.